ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಐಸಿಸಿ ಟಿ-20 ವಿಶ್ವಕಪ್ ಟೂರ್ನಿಯ ಅಮೇರಿಕ ವಿರುದ್ಧ ಪಂದ್ಯದಲ್ಲಿ ನಾಯಕ ಸೂರ್ಯಕುಮಾರ್ ಯಾದವ್ ಅವರ ಅರ್ಧ ಶತಕದ (84 ರನ್) ನೆರವಿನಿಂದ ಭಾರತ ಸ್ಪರ್ಧಾತ್ಮಕ ಮೊತ್ತ ಪೇರಿಸಿದೆ. 9 ವಿಕೆಟ್‌ಗೆ 161 ರನ್ ಗಳಿಸಿದೆ.

08 ಫೆಬ್ರವರಿ 2026 ಭಾನುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 325 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629



ಕಾಡು ಕಡಿದು ಅಭಿವೃದ್ಧಿಯೇ? ಖಂಡಿತಾ ಕೂಡದು! » 2



ಸಫಾರಿ ಬಳಸಿ ಅರಣ್ಯ ಉಳಿಸಿ » 3



ಭ್ರಷ್ಟರನ್ನು ಬಹಿಷ್ಕರಿಸುವ ಮನೋಭಾವ ಬೆಳೆಯಲಿ » 4

# ಭಾರತದ ಮೇಲಿನ ಸುಂಕ ಶೇ.18ಕ್ಕೆ ಇಳಿಕೆ

## ಅಮೇರಿಕಾದೊಂದಿಗೆ ಮಧ್ಯಂತರ ವ್ಯಾಪಾರ ಒಪ್ಪಂದ: ಉಭಯ ದೇಶಗಳ ಜಂಟಿ ಹೇಳಿಕೆ

• ಪ್ರಜೋದಯ ವರದಿ

**ನವದೆಹಲಿ:** ಭಾರತ ಮತ್ತು ಅಮೇರಿಕಾ ನಡುವೆ ಶನಿವಾರ ಮಧ್ಯಂತರ ವ್ಯಾಪಾರ ಏರ್ಪಟ್ಟಿದೆ. ಅದರಂತೆ ಭಾರತದ ಮೇಲಿನ ಸುಂಕ ಶೇ.18ಕ್ಕೆ ಇಳಿಕೆಯಾಗಿದೆ.

ಒಪ್ಪಂದದಂತೆ ಭಾರತವು ಅಮೇರಿಕಾದಿಂದ ಆಮದು ಮಾಡಿಕೊಳ್ಳುವ ಎಲ್ಲಾ ಕೈಗಾರಿಕಾ ವಸ್ತುಗಳು, ಒಣ ಡಿಸ್ಟಿಲರ್ ಧಾನ್ಯಗಳು, ಕೆಂಪು ಜೋಳ, ಬೀಜ, ತಾಜಾ ಹಾಗು ಸಂಸ್ಕರಿಸಿದ ಹಣ್ಣುಗಳು, ಸೋಯಾ ಬೀನ್ ಎಣ್ಣೆ, ವೈನ್ ಮತ್ತು ಸ್ಪಿರಿಟ್ ಸೇರಿ ವಿವಿಧ ವಸ್ತುಗಳ ಮೇಲಿನ ಸಂಕವನ್ನು ತೆಗೆದು ಹಾಕಲಿದೆ ಅಥವಾ ಕಡಿಮೆ ಮಾಡಲಿವೆ. ರಷ್ಯಾದಿಂದ ತೈಲ ಖರೀದಿಗೆ ಸಂಬಂಧಿಸಿದಂತೆ ಕಳೆದ ವರ್ಷ ಆಗಸ್ಟ್‌ನಲ್ಲಿ ಭಾರತದ ಮೇಲೆ ಅಮೇರಿಕಾ ಶೇ.25ರ ಹೊರತಾಗಿ ಹೆಚ್ಚುವರಿಯಾಗಿ ಶೇ.25ರಷ್ಟು ಸುಂಕ ವಿಧಿಸಿತ್ತು.

2025ರ ಫೆಬ್ರವರಿ 13ರಂದು ಅಮೇರಿಕಾ ಅಧ್ಯಕ್ಷ ಡ್ರೋನಾಲ್ಡ್ ಟ್ರಂಪ್ ಹಾಗು ಪ್ರಧಾನಿ ನರೇಂದ್ರ ಮೋದಿ ಮಾತು ಕತೆಯನ್ನು ಪ್ರಾರಂಭಿಸಿದ ಬಳಿಕ ದ್ವಿ ಪಕ್ಷೀಯ ವ್ಯಾಪಾರ ಒಪ್ಪಂದಕ್ಕೆ ಸಂಬಂಧಿಸಿದಂತೆ ಬದ್ಧತೆಯನ್ನು ಪುನರುಚ್ಚರಿಸಲಾಗಿದೆ. ಸುಂಕ ಕಡಿತದಿಂದಾಗಿ ಭಾರತದ ಜವಳಿ ಉಡುಪುಗಳು, ಚರ್ಮ, ಪಾದರಕ್ಷೆ, ಪ್ಲಾಸ್ಟಿಕ್, ರಬ್ಬರ್, ಸಾವಯವ ರಾಸಾಯನಿಕ, ಗೃಹಾಲಂಕಾರ, ಕುಶಲಕರ್ಮಿ ಉತ್ಪನ್ನ ಮತ್ತು ಯಂತ್ರೋಪಕರಣಗಳ ರಫ್ತು ಹೆಚ್ಚಿಸಲು ನೆರವಾಗಲಿದೆ ಎಂದಿದೆ. ಜೆನೆರಿಕ್ ಔಷಧಗಳು, ರತ್ನ, ವಜ್ರ, ವಿಮಾನಗಳ ಬಿಡಿಭಾಗ ಸೇರಿ ಹಲವು ವಸ್ತುಗಳ ಮೇಲೆ ಸುಂಕ ಶೂನ್ಯಕ್ಕೆ ಇಳಿಕೆಯಾಗಲಿವೆ. ಅದರಿಂದ ಭಾರತದ ರಫ್ತು ಹಾಗೂ ಮೇಕ್ ಇನ್ ಇಂಡಿಯಾ ಅಭಿಯಾನಕ್ಕೆ ಉತ್ತೇಜನ ಸಿಗಲಿದೆ.

ಭಾರತದ ಕೆಲವು ವಿಮಾನಗಳ ಬಿಡಿ ಭಾಗಗಳ ಮೇಲಿನ ಸುಂಕವನ್ನು ಅಮೇರಿಕಾ ತೆಗೆದು ಹಾಕಲಿದೆ. ಉಭಯ ದೇಶಗಳು ಆದ್ಯತೆಯ » ನಾಲ್ಕನೇ ಪುಟದಲ್ಲಿ



**ಭಾರತ ಮತ್ತು ಅಮೇರಿಕಾಕ್ಕೆ ಒಳ್ಳೆಯ ಸುದ್ದಿ. ಮಧ್ಯಂತರ ವ್ಯಾಪಾರ ಒಪ್ಪಂದವು ರೈತರು ಮತ್ತು ಉದ್ಯಮಿಗಳಿಗೆ ಹೊಸ ಅವಕಾಶಗಳನ್ನು ತೆರೆಯುವ ಮೂಲಕ ಮೇಕ್ ಇನ್ ಇಂಡಿಯಾ ಉಪಕ್ರಮವನ್ನು ಬಲಪಡಿಸುತ್ತದೆ. ಮಹಿಳೆಯರು ಮತ್ತು ಯುವಜನತೆಗೆ ಉದ್ಯೋಗಗಳನ್ನು ಸೃಷ್ಟಿಸುತ್ತದೆ.**
**-ನರೇಂದ್ರ ಮೋದಿ, ಪ್ರಧಾನಿ**

### ಮುಖ್ಯಾಂಶಗಳು

- ಭಾರತದ ಮೇಲಿನ ಸುಂಕ ಶೇ.50ರಿಂದ 18ಕ್ಕೆ ಇಳಿಕೆ
- ರೈತರು ಮತ್ತು ಮೀನುಗಾರರಿಗೆ 30 ಟ್ರಿಲಿಯನ್ ಡಾಲರ್ ಮಾರುಕಟ್ಟೆ ಪ್ರವೇಶ
- ರಫ್ತು ಹೆಚ್ಚಳದಿಂದ ಲಕ್ಷಾಂತರ ಹೊಸ ಉದ್ಯೋಗಾವಕಾಶ
- ಮಾರುಕಟ್ಟೆ ಪ್ರವೇಶ ಅವಕಾಶ ವಿಸ್ತರಣೆ
- ಆರ್ಥಿಕ ಭದ್ರತೆ ಬಲಪಡಿಸಲು ಪರಸ್ಪರ ಸಹಕಾರ
- ಜವಳಿ ಉಡುಪುಗಳು, ಚರ್ಮ, ಪಾದರಕ್ಷೆ, ಪ್ಲಾಸ್ಟಿಕ್, ರಬ್ಬರ್, ಸಾವಯವ ರಾಸಾಯನಿಕ, ಗೃಹಾಲಂಕಾರ, ಕುಶಲಕರ್ಮಿ ಉತ್ಪನ್ನ ಮತ್ತು ಯಂತ್ರೋಪಕರಣಗಳಂತಹ ಪ್ರಮುಖ ವಲಯಗಳಲ್ಲಿ ರಫ್ತು ಹೆಚ್ಚಿಸಲು ಮಾರುಕಟ್ಟೆ ಅವಕಾಶ
- ಕೃಷಿ, ಡೇರಿ ಉತ್ಪನ್ನ, ತರಕಾರಿ ಹಾಗು ಮಾಂಸಕ್ಕೆ ಭಾರತ ಸಂಪೂರ್ಣ ರಕ್ಷಣೆ ಒದಗಿಸುವುದು
- ವೈದ್ಯಕೀಯ ಪರಿಕರಗಳ ವ್ಯಾಪಾರಕ್ಕೆ ಇದ್ದ ಅಡೆತಡೆ ನಿವಾರಣೆಗೆ ಭಾರತ ಸಮ್ಮತಿ

## ರಾಷ್ಟ್ರಕವಿ ಕುವೆಂಪು ಸರ್ವಗುಣ ಯೋಗಿ: ಶಂಭುನಾಥ ಶ್ರೀ

• ಪ್ರಜೋದಯ ವರದಿ

**ಹಾಸನ:** ಸರ್ವಗುಣ ಯೋಗಿ ಎನಿಸಿಕೊಂಡಿರುವ ರಾಷ್ಟ್ರಕವಿ ಕುವೆಂಪು ಅವರ ಬರಹವನ್ನು ಯುವಕರು ಓದುವ ಮೂಲಕ ಭಾರತೀಯ ಆಧ್ಯಾತ್ಮಿಕ, ಸಾಂಸ್ಕೃತಿಕ ಪರಂಪರೆಯನ್ನು ಅರಿಯಬೇಕೆಂದು ಆದಿ ಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಸಲಹೆ ನೀಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ, ಜಿಲ್ಲಾ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿ ಒಕ್ಕೂಟ, ರೋಟರಿ ಕ್ಲಬ್ ಆಫ್ ಹಾಸನ್ ಟೈಗರ್, ಅಮೋಘ ಸುದ್ದಿ ವಾಹಿನಿ ಸಹಯೋಗದಲ್ಲಿ ಬೆಂಗಳೂರಿನ ಮನೋಜ್ಞ ನೃತ್ಯಕಲಾ ಅಕಾಡೆಮಿ ವತಿಯಿಂದ ನಗರದ ಆದಿ ಚುಂಚನಗಿರಿ ಆಂಗ್ಲ ಮಾಧ್ಯಮ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಕಾಡಿನ ಕೊಳಲು ಕುವೆಂಪು ಗೀತೆಗಳ ನೃತ್ಯ ರೂಪಕ ಸಮಾರಂಭದಲ್ಲಿ ಮಾತನಾಡಿದರು.

ಕುವೆಂಪು ಅವರನ್ನು ಎಲ್ಲರಿಗೂ ಪರಿಚಯಿಸಬೇಕಿದೆ. ಸಾಂಸ್ಕೃತಿಕ, ಆಧ್ಯಾತ್ಮಿಕವಾಗಿ ಭಾರತ ಸಾಕಷ್ಟು ಖ್ಯಾತಿ ಹೊಂದಿದೆ. ಪುರಾತನ ಪರಂಪರೆ ಬಗ್ಗೆ ವಿಶ್ವವೇ ಅಚ್ಚರಿ ವ್ಯಕ್ತ ಪಡಿಸುತ್ತದೆ. ಅಂತಹ ಶಕ್ತಿಯನ್ನು ಸಾಹಿತ್ಯದ ಮೂಲಕ ಪರಿಚಯಿಸಿ ಕೊಟ್ಟವರು ರಾಷ್ಟ್ರಕವಿ ಕುವೆಂಪು ಎಂದರು.

ಮನುಷ್ಯ ಚಿಂತನೆಗಳಲ್ಲಿ ಭಾವ ಹಾಗು ಅಭಾವ ಮುಖ್ಯವಾಗುತ್ತದೆ. ಯಾವುದನ್ನೇ ಆಗಲಿ ಭಾವದಿಂದ ನೋಡಬೇಕೇ ಹೊರತು ಅಭಾವದಿಂದ ಅಲ್ಲ. ಋಷಿಗಳಿಗೆ ನೋಡಿದ್ದೆಲ್ಲ ಭಾವವಾಗಿ ಕಾಣುತ್ತದೆ. ಆದ್ದರಿಂದಲೇ ಅವರು ಅಸಾಧ್ಯವಾದುದನ್ನು ಸಾಧಿಸಿದ್ದಾರೆಂದರು.

ಭಾವನೆಗಳು ಬದಲಾದರೆ ಮನುಷ್ಯರಾಗಲು ಸಾಧ್ಯವಿಲ್ಲ. ಮನುಷ್ಯ ಭಾವನೆಗಳನ್ನು ಹೊಂದಬೇಕು. ವ್ಯಕ್ತಿಯ ಚಿಂತನಾ ಲಹರಿ ಆಳಕ್ಕಿಳಿಯಬೇಕೆಂದರೆ ಕುವೆಂಪು ಸಾಹಿತ್ಯ ಓದ ಬೇಕು. ಮರಣ ಇಲ್ಲದ ವಸ್ತು ಎಂದರೆ ಪುಸ್ತಕ ಮಾತ್ರ. ಭಗವಂತ ಕೊಟ್ಟ ಸುಂದರ ಬದುಕನ್ನು ಸಾರ್ಥಕ ಮಾಡಿಕೊಳ್ಳಬೇಕು. ಸತ್ಕಾರ್ಯಗಳಲ್ಲಿ ನಮ್ಮನ್ನು » ನಾಲ್ಕನೇ ಪುಟದಲ್ಲಿ



## ಮೈತ್ರಿ ಭಂಗವಾಗದಂತೆ ರಾಷ್ಟ್ರೀಯ ನಾಯಕರ ತೀರ್ಮಾನ: ಪ್ರೀತಮ್

• ಪ್ರಜೋದಯ ವರದಿ

**ಹಾಸನ:** ಜೆಡಿಎಸ್ ಜೊತೆಗಿನ ಮೈತ್ರಿ ಕುರಿತು ಪಕ್ಷದ ಜಿಲ್ಲಾ ನಾಯಕರಲ್ಲಿ ಸ್ಪಷ್ಟತೆ ಇದೆ ಯಾದರೂ ಮೈತ್ರಿಯಲ್ಲಿ ಒಡಕುಂಟಾಗದಂತೆ ರಾಷ್ಟ್ರೀಯ ನಾಯಕರು ಕ್ರಮ ಕೈಗೊಳ್ಳುತ್ತಾರೆಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಜೆ.ಗೌಡ ಅವರು ಹೇಳಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ ಚುನಾವಣೆ ಕುರಿತು ಪಕ್ಷ ಸಂಘಟನೆ ದೃಷ್ಟಿಯಿಂದ ಜಿಲ್ಲೆಯ ಏಳು ವಿಧಾನ ಸಭಾ ಕ್ಷೇತ್ರಗಳ ಮುಖಂಡರ ಸಭೆ ನಡೆಸಿ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಲಾಗಿದೆಯೆಂದರು. ಜಿಲ್ಲೆಯಲ್ಲಿ ಬಿಜೆಪಿ ಪ್ರಬಲ ಪಕ್ಷವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿ ಸಭೆ ನಡೆಸಿ ಪಕ್ಷ ಸಂಘಟನೆಗೆ ಒತ್ತು ನೀಡಲಾಗುವುದೆಂದರು.

ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಜೆಡಿಎಸ್ ಜೊತೆಗೆ ಮೈತ್ರಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಪ್ರೀತಮ್‌ಗೌಡ, ಜಿಲ್ಲೆಯ ಬಿಜೆಪಿ ನಾಯಕರಲ್ಲಿ ಸ್ಪಷ್ಟತೆ ಇದ್ದರೂ, ರಾಷ್ಟ್ರೀಯ ನಾಯಕರ ತೀರ್ಮಾನದಂತೆ ಮೈತ್ರಿಯಲ್ಲಿ ಒಡಕು ಬಾರದಂತೆ ನಡೆದುಕೊಳ್ಳಬೇಕಾಗಿದೆ. ಜಿಲ್ಲೆಯಲ್ಲಿ ಬಿಜೆಪಿ ಸ್ವಂತ ಶಕ್ತಿಯ ಮೇಲೆ ಚುನಾವಣೆ ಎದುರಿಸಬೇಕೆಂಬುದು ಬಹುತೇಕ ಕಾರ್ಯಕರ್ತರ ಅಭಿಪ್ರಾಯ. ಮೈತ್ರಿಯಿಂದ ಪಕ್ಷದ ಕಾರ್ಯಕರ್ತರು ಅವಕಾಶಗಳಿಂದ ವಂಚಿತರಾಗುವ ಆತಂಕವಿದ್ದು, ಇದು ವಿರೋಧ ಪಕ್ಷಗಳಿಗೆ ಲಾಭವಾಗುವ ಸಾಧ್ಯತೆ ಇದೆಯಿದೆ ಎಂದರು.

ಜಿಲ್ಲೆಯ ಮೂರುನಾಲ್ಕು ವಿಧಾನ ಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಬಲಿಷ್ಠವಾಗಿದ್ದು, ಸ್ವಂತ ಶಕ್ತಿಯ ಮೇಲೆ ಚುನಾವಣೆ ಎದುರಿಸಿದರೆ ಅಧಿಕಾರ ಹಿಡಿಯಲು ಅನುಕೂಲವಾಗುತ್ತದೆಯೆಂಬ ಅಭಿಪ್ರಾಯ ಕಾರ್ಯಕರ್ತರಲ್ಲಿ ವ್ಯಕ್ತವಾಗಿದೆ. ಈ ವಿಚಾರವನ್ನು ರಾಷ್ಟ್ರೀಯ ನಾಯಕರ ಗಮನಕ್ಕೆ ತರಲಾಗುವುದು ಎಂದರು.

ಜೆಡಿಎಸ್ ಪಕ್ಷದಲ್ಲಿ ಗೊಂದಲ ಇರಬಹುದಾದರೂ, ಮೈತ್ರಿ ಧರ್ಮದ ಹಿತದೃಷ್ಟಿಯಿಂದ ರಾಷ್ಟ್ರೀಯ ನಾಯಕರ ತೀರ್ಮಾನಕ್ಕೆ ಬದ್ಧರಾಗಿರುತ್ತೇವೆಂದು ತಿಳಿಸಿದ ಅವರು, ತಾವು ಕಾರ್ಯಕರ್ತನಾಗಿ ಪ್ರತ್ಯೇಕವಾಗಿ ಚುನಾವಣೆಯನ್ನು ಎದುರಿಸಬೇಕೆಂಬ ಅಭಿಪ್ರಾಯ ಹೊಂದಿದ್ದರೂ, ಅಗತ್ಯವಿರುವ ಸ್ಥಳಗಳಲ್ಲಿ ಹೊಂದಾಣಿಕೆ ಸಾಧ್ಯವಿದೆ ಎಂದರು.

ಜೆಡಿಎಸ್-ಬಿಜೆಪಿ ಹೊಂದಾಣಿಕೆಯಿಂದ » ನಾಲ್ಕನೇ ಪುಟದಲ್ಲಿ



# ಪ್ರಜಾಪ್ರಭುತ್ವದಲ್ಲಿ ನ್ಯಾಯಾಂಗದ ಹೊಣೆಗಾರಿಕೆ ಹೆಚ್ಚು

## ಹೈಕೋರ್ಟ್ ನ್ಯಾಯಾಧೀಶ ಹೆಚ್.ಪಿ.ಸಂದೇಶ್ | ವಕೀಲರಿಗೆ ಕಾನೂನು ಕಾರ್ಯಾಗಾರ

• ಪ್ರಜೋದಯ ವರದಿ

**ಹಾಸನ:** ಭಾರತದ ಪ್ರಜಾಪ್ರಭುತ್ವ ಉಳಿಸುವ ಮಹತ್ವದ ಜವಾಬ್ದಾರಿಯನ್ನು ಸಂವಿಧಾನ ನ್ಯಾಯಾಂಗಕ್ಕೆ ಕಲ್ಪಿಸಿಕೊಟ್ಟಿದ್ದು, ವಕೀಲರು ಹಾಗು ನ್ಯಾಯಾಧೀಶರು ಆ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಯಾರನ್ನೋ ಮೆಚ್ಚಿಸುವ ಬದಲು ನ್ಯಾಯದಪರ ನಿಲ್ಲಬೇಕೆಂದು ಹೈಕೋರ್ಟ್ ನ್ಯಾಯಾಧೀಶ ಹೆಚ್.ಪಿ.ಸಂದೇಶ್ ಅವರು ಹೇಳಿದರು.

ರಾಜ್ಯ ವಕೀಲರ ಪರಿಷತ್, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಹಮ್ಮಿಕೊಂಡಿರುವ ಮೂರು ದಿನಗಳ ಕಾನೂನು ಕಾರ್ಯಾಗಾರ ಉದ್ಘಾಟಿಸಿ ಶನಿವಾರ ಮಾತನಾಡಿದ ಅವರು, ಯಾವ ಇಲಾಖೆಗೆ ಇರದ ಜವಾಬ್ದಾರಿ ನ್ಯಾಯಾಂಗಕ್ಕಿದೆ. ಜನರ ವಿಶ್ವಾಸ ಉಳಿಸಿಕೊಳ್ಳುವ ಹೊಣೆಗಾರಿಕೆ ನಮ್ಮೆಲ್ಲರ ದ್ದಾಗಿದೆಯೆಂದರು. ವಕೀಲರು ಅನ್ಯಾಯದ ವಿರುದ್ಧ ಹೋರಾಡಬೇಕೆಂದರೆ ಕಾನೂನಿನ ತಿಳಿವಳಿಕೆ ಇರಬೇಕು. ಅದಕ್ಕಾಗಿ ನಿರಂತರ ಅಧ್ಯಯನ ಅತ್ಯವಶ್ಯವೆಂದರು.

ಶಿಸ್ತು, ಸಮಯ ಪ್ರಜ್ಞೆ, ನಿರ್ಭೀತಿ, ತಾಳ್ಮೆ ಹಾಗು ಪರಿಶ್ರಮ ಅಳವಡಿಸಿಕೊಳ್ಳುವವರು ಸೋಲಲು ಸಾಧ್ಯವಿಲ್ಲ. ವಕೀಲರ ದುಡ್ಡಿನ ಹಿಂದೆ ಬೀಳದೆ ನ್ಯಾಯದ ಪರವಾಗಿ ನಿಲ್ಲಬೇಕು. ಸಾಫ್ಟ್‌ವೇರ್ ಇಂಜಿನೀಯರ್‌ಗಳಂತೆ ತಿಂಗಳಿಗೆ ಲಕ್ಷ-ಲಕ್ಷ ರೂಪಾಯಿ ಸಂಪಾದಿಸಬೇಕೆಂದು ಹೊರಟರೆ ಅಂತಹ ವಕೀಲ ಯಶಸ್ವಿಯಾಗಲು ಸಾಧ್ಯವಿಲ್ಲ. ಸರಸ್ವತಿಯ ಅನುಗ್ರಹವಿದ್ದರೆ ಲಕ್ಷ್ಮೀ ತಾನಾಗಿಯೇ ಬರುತ್ತದೆಂದು ಕಿವಿಮಾತು ಹೇಳಿದರು.

**ಜ್ಞಾನಾರ್ಜನೆಗೆ ವಯಸ್ಸಿನ ಮಿತಿ ಇಲ್ಲ**

ವಕೀಲರಾದ ಮಾತ್ರಕ್ಕೆ ಎಲ್ಲವನ್ನೂ ತಿಳಿದುಕೊಂಡಿದ್ದೇವೆಂಬ ಅಹಂ ಬರಬಾರದು. ಜ್ಞಾನಾ ರ್ಜನೆಗೆ ವಯಸ್ಸಿನ ಮಿತಿಯಿಲ್ಲ. ಹುಟ್ಟಿನಿಂದ ಜೀವಿತದ ಕೊನೆಯವರೆಗೆ ಕಲಿಯುವುದು ಇದ್ದೇ ಇರುತ್ತದೆ. ಕತ್ತಲೆಯಿಂದ ಬೆಳಕಿನೆಡೆಗೆ ಕರೆದೊಯ್ಯುವುದು ಶಿಕ್ಷಣ. ಆದ್ದರಿಂದ ಎಲ್ಲರೂ ಕಲಿಕೆಗೆ ಆಸಕ್ತಿ ತೋರಬೇಕು. ವಕೀಲರು ಯಾವಾಗಲೂ ವಿದ್ಯಾರ್ಥಿಯಾಗಿಯೇ ಇರಬೇಕಾಗುತ್ತದೆ. ಜ್ಞಾನ ಸಂಪಾದಿಸಿಕೊಂಡ ವಕೀಲರಿಗೆ ನಿವೃತ್ತಿ ಎಂಬುದೇ ಇಲ್ಲವೆಂದರು.

**ಉತ್ಸಾಹದಿಂದ ವೃತ್ತಿ ಸ್ವೀಕರಿಸಿ**

ಕಿರಿಯ ವಕೀಲರನ್ನು ಸದೃಢರನ್ನಾಗಿಸುವ ಹೊಣೆಗಾರಿಕೆ ಹಿರಿಯ ವಕೀಲರ ಮೇಲಿದೆ. ಅವರಲ್ಲಿ ವಿಶ್ವಾಸ ಬೆಳೆಸುವ ಕೆಲಸಗಳಾಗಬೇಕು. ಯುವ ವಕೀಲರಿಗೆ ಸಮಯ ಪ್ರಜ್ಞೆ ಅತ್ಯವಶ್ಯಕವಾಗಿದೆ. ಇತ್ತೀಚಿನ ಸಮುದಾಯಕ್ಕೆ ಕಲಿಯಬೇಕೆಂಬ ಹಂಬಲ ಕಾಣಿಸುತ್ತಿಲ್ಲ. » ನಾಲ್ಕನೇ ಪುಟದಲ್ಲಿ



### ರಾಜಕಾರಣಿ ಮನೆ ಬಾಗಿಲು ತಟ್ಟುವುದಿಲ್ಲ

2026ರ ಡಿಸೆಂಬರ್ 11ಕ್ಕೆ ಸೇವೆಯಿಂದ ನಿವೃತ್ತನಾಗುತ್ತೇನೆ. ನಂತರದ ದಿನಗಳನ್ನು ಹೇಗೆ ಕಳೆಯಬೇಕೆಂದು ಈಗಲೇ ಯೋಜನೆ ರೂಪಿಸಿದ್ದೇನೆ. ರಾಜ್ಯಾದ್ಯಂತ ಶಾಲಾ-ಕಾಲೇಜುಗಳಿಗೆ ತೆರಳಿ ಯುವಕರಿಗೆ ಕಾನೂನು ಅರಿವು ಮೂಡಿಸುತ್ತೇನೆಂದು ಹೈಕೋರ್ಟ್ ನ್ಯಾಯಾಧೀಶ ಹೆಚ್.ಪಿ.ಸಂದೇಶ್ ಅವರು ಹೇಳಿದರು.

ಜಸ್ಟೀಸ್ ಸಂದೇಶ್ ಜ್ಯೂಡಿಷಿಯಲ್ ಅಕಾಡೆಮಿ ತೆರೆಯುತ್ತೇನೆ. ಗ್ರಾಮೀಣ ಭಾಗದ ವಕೀಲರು ಹಾಗು ವಿದ್ಯಾರ್ಥಿಗಳಿಗೆ ಕಾರ್ಯಾಗಾರ ಮಾಡುತ್ತೇನೆ. ಜಿಲ್ಲಾ ನ್ಯಾಯಾಂಗವನ್ನು ಸದೃಢಗೊಳಿಸಬೇಕೆಂದು ಪಣ ತೊಟ್ಟಿದ್ದೇನೆ. ನನ್ನ ಬಳಿ ಕಲಿತವರು ನ್ಯಾಯಾಧೀಶರಾಗಿ ಸಮಾಜಕ್ಕೆ ಒಳ್ಳೆಯ ಕೊಡುಗೆ ನೀಡಬೇಕೆಂಬ ಮಹದಾಸೆ ನನಗಿದೆ. ಪಿಂಚಣಿ ಹಣದಿಂದಲೇ ಈ ಎಲ್ಲಾ ಕೆಲಸ ಮಾಡುತ್ತೇನೆ. ನಿವೃತ್ತಿ ನಂತರ ವಿಶೇಷ ಸವಲತ್ತುಗಳಿಗಾಗಿ ರಾಜಕಾರಣಿ ಮನೆ ಬಾಗಿಲು ತಟ್ಟುವುದಿಲ್ಲ. ನನ್ನ ಜೀವನ ಹಾಗು ದಾರಿಯ ಸ್ಪಷ್ಟತೆ ಇದೆಯೆಂದರು.

**ಇತ್ತೀಚಿನ ದಿನಗಳಲ್ಲಿ ವಕೀಲರಲ್ಲಿ ಅಧ್ಯಯನ ಕೊರತೆ ಹೆಚ್ಚುತ್ತಿದೆ. ತಂತ್ರಜ್ಞಾನ ಅಭಿ ವೃದ್ಧಿಯಾದಂತೆ ವೃತ್ತಿ ವಿಧಾನವೂ ಬದಲಾಗುತ್ತದೆ. ವಕೀಲರು ನಿರಂತರ ಅಧ್ಯಯನ ಶೀಲರಾಗಬೇಕು. ಕೇವಲ ದುಡ್ಡಿಗಾಗಿ ಕೆಲಸ ಮಾಡಿದರೆ ಯಶಸ್ಸು ಗಳಿಸಲು ಸಾಧ್ಯವಿಲ್ಲ.**
**-ಹೆಚ್.ಪಿ.ಸಂದೇಶ್, ಹೈಕೋರ್ಟ್ ನ್ಯಾಯಾಧೀಶ**

## ಈಜಲು ಹೋಗಿದ್ದ ವಿದ್ಯಾರ್ಥಿ ನೀರುಪಾಲು

• ಪ್ರಜೋದಯ ವರದಿ



**ಹಾಸನ:** ಕೆರೆಯಲ್ಲಿ ಈಜಲು ಹೋಗಿದ್ದ ವಿದ್ಯಾರ್ಥಿ ನೀರು ಪಾಲಾದ ಘಟನೆ ನಗರ ಹೊರ ವಲಯದ ಉದ್ದೂರು ಗ್ರಾಮದಲ್ಲಿ ನಡೆದಿದೆ. ಪ್ರಜ್ವಲ್ (18) ಮೃತಪಟ್ಟ ವಿದ್ಯಾರ್ಥಿ.

ನಗರ ಖಾಸಗಿ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದ ಪ್ರಜ್ವಲ್, ಶನಿವಾರ ಮಧ್ಯಾಹ್ನ ನಾಲ್ವರು ಸ್ನೇಹಿತರ ಜೊತೆ ಉದ್ದೂರು ಕೆರೆಗೆ ಈಜಲು ತೆರಳಿದ್ದ. ಐವರಲ್ಲಿ ಇಬ್ಬರು ಸ್ನೇಹಿತರು ಈಜಲು ನೀರಿಗೆ ಇಳಿದಿದ್ದರು. ಕೆರೆಯ ಆಳವಾದ ಪ್ರದೇಶಕ್ಕೆ ಈಜುತ್ತಾ ಹೋಗಿದ್ದ ಪ್ರಜ್ವಲ್ ವಾಪಾಸ್ ಬರಲು ಆಗದೇ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ. ಅಗ್ನಿಶಾಮಕ ದಳದ ಸಿಬ್ಬಂದಿ ಕೆರೆಯಿಂದ ಮೃತದೇಹವನ್ನು ಹೊರಗೆ ತೆಗೆದಿದ್ದಾರೆ. ಸ್ಥಳಕ್ಕೆ ಪೆನ್ಷನ್ ಮೊಹಲ್ಲಾ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

### ಕುಮ್ಮಕ್ಕು ಇಲ್ಲದೆ ಇಷ್ಟೆಲ್ಲ ನಡೆಯದು: ಕೆ.ಎಂ.ಶಿವಲಿಂಗೇಗೌಡ ಆರೋಪ

# ಜೆಡಿಎಸ್ ಬಿಟ್ಟು ಬಂದಿದ್ದಕ್ಕೆ ನನ್ನ ವಿರುದ್ಧ ಷಡ್ಯಂತ್ರ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ದೇವೇಗೌಡರನ್ನು ಬಿಟ್ಟು ಹೋದವರು ಯಾರೂ ಗೆಲ್ಲಲಿಲ್ಲ. ನಾನೊಬ್ಬ ಗೆದ್ದೆ ಎಂಬ ಕಾರಣಕ್ಕೆ ನನ್ನ ವಿರುದ್ಧ ಷಡ್ಯಂತ್ರ ಮಾಡಲಾಗುತ್ತಿದೆ ಎಂದು ಗೃಹಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಅವರು ಆರೋಪಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುಮ್ಮಕ್ಕು ಇಲ್ಲದೆ, ಇಷ್ಟೆಲ್ಲ ನಡೆ ಯದು. ನಾನು ದೇವೇಗೌಡರ ಕುಟುಂಬಕ್ಕೆ ಚೂರಿ ಹಾಕಿ ಹೋಗಿಲ್ಲ, ಸಭೆಯೊಂದರಲ್ಲಿ ನೀವು ಅರಸೀಕೆರೆಗೆ ವಿಧಾನ ಪರಿಷತ್ ಸ್ಥಾನ ಕೊಡಲಿಲ್ಲ, ಆ ಕಾರಣಕ್ಕೆ ಹೊರ ಹೋಗುತ್ತಿದ್ದೇನೆಂದು ಬಹಿರಂಗ ಸಭೆಯಲ್ಲೇ ಹೇಳಿ ಹೋಗಿದ್ದೇನೆ. ನಾನು ಜೆಡಿಎಸ್‌ನಲ್ಲಿದ್ದಾಗ ಅವರಗೆಲುವಿಗೆ ನಾನೂ ಮತ ಹಾಕಿಸಿದ್ದೇನೆ. ನಾನು ಅವರಿಗೆ ಚಾಕು ಹಾಕಿದ್ದರೆ ಜನ ನನ್ನ ಸೋಲಿಸುತ್ತಿದ್ದರು. 20 ಸಾವಿರ ಮತಗಳಿಂದ ಏಕೆ ಗೆಲ್ಲಿಸಿದರೆಂದು ಪ್ರಶ್ನಿಸಿದರು.

ಹಿಂದೆ ದೇವೇಗೌಡರು ನಾನು ಬದುಕಿರುವವರೆಗೂ ಬಿಜೆಪಿ ಸಖ್ಯ ಮಾಡುವುದಿಲ್ಲ ಎಂದಿದ್ದರು. ಆದರೀಗ ಅವರ ಜೊತೆಯಲ್ಲೇ ಇದ್ದಾರೆ. ರಾಜಕೀಯದಲ್ಲಿ ಇದೆಲ್ಲ ಸಾಮಾನ್ಯ, ಅದು ಅನಿವಾರ್ಯ ಕೂಡ, ಅವರ ಸಂಘ ಬಿಟ್ಟೆ ಅನ್ನೋ ಕಾರಣಕ್ಕೆ ಜೆಡಿಎಸ್‌ನವರು ನನ್ನ ಮೇಲೆ ಸಿಟ್ಟು ಮಾಡಿಕೊಳ್ಳುವುದು, ಹಗೆ ಸಾಧಿಸುವುದು ಒಳ್ಳೆಯದಲ್ಲ. ಕಳೆದ ಎರಡೂವರೆ ವರ್ಷಗಳಿಂದಲೂ ವಿಧಾನಸಭೆಯಲ್ಲಿ ನನಗೆ ಹಿಂಸೆ ನೀಡಲಾಗುತ್ತಿದೆಂದು ಆರೋಪಿಸಿದರು.

ಅಧಿವೇಶನದಲ್ಲಿ ದೃಶ್ಯ ಮಾಧ್ಯಮಗಳು ಸದನದಲ್ಲಿ ಇದ್ದಿದ್ದರೆ ಅವರ ಪ್ರಚೋದನೆ, » ನಾಲ್ಕನೇ ಪುಟದಲ್ಲಿ




### ಕಳ್ಳ ಎಂಬುದನ್ನು ಸಾಬೀತು ಮಾಡ್ತೀರಾ..?

ಮಾತೆತ್ತಿದರೆ ನನ್ನನ್ನು ರಾಗಿ ಕಳ್ಳ, ಕೊಬ್ಬರಿ ಕಳ್ಳ, ದೇವೇಗೌಡರಿಗೆ ಚೂರಿ ಹಾಕಿದ್ದೇನೆಂದು ಪದೇ ಪದೇ ಕಿಚಾಯಿಸುತ್ತಿದ್ದರು. ಕಳ್ಳ, ದರೋಡೆಕೋರ ಅನ್ನೋದು ಅಸಂವಿಧಾನಿಕ ಪದ ಅಲ್ಲವೇ. ಮನರೇಗಾ ಯೋಜನೆ ಅಗತ್ಯತೆ ಬಗ್ಗೆ ನಾನು ಮಾತನಾಡಲು ಬಿಡದೆ ಕಲಾಪದ ವೇಳೆ ಕುಣಿಯಲು ಆರಂಭಿಸಿದರು. ತಾಳ್ಮೆ ಕಳೆದುಕೊಂಡು ನಾನು ಮಾತನಾಡಬೇಕಾಯಿತು. 20 ವರ್ಷದಲ್ಲಿ ಸದನದಲ್ಲಿ ಹೀಗೆ ಆಗಿದ್ದು ಇದೇ ಮೊದಲು. ನಾನು ಕಳ್ಳ ಅನ್ನೋ ದನ್ನು ಇವರು ಸಾಬೀತು ಮಾಡುತ್ತಾರ ಎಂದು ಪ್ರಶ್ನಿಸಿದರು.

## ಸಂಸದರಿಂದ ವಿವಿಧ ಇಲಾಖೆ ಪ್ರಗತಿ ಪರಿಶೀಲನೆ

• ಪ್ರಜೋದಯ ವರದಿ

**ಹಾಸನ:** ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕರು, ಜಿಲ್ಲಾ ಉದ್ಯೋಗಾಧಿಕಾರಿ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಹಾಗು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳೊಂದಿಗೆ ಸಂಸದ ಶ್ರೇಯಸ್ ಪಟೇಲ್ ಅವರು ಸಭೆ ನಡೆಸಿದರು.

ನಗರ ಸಂಸದರ ಕಚೇರಿಯಲ್ಲಿ ಶನಿವಾರ ನಡೆದ ಸಭೆಯಲ್ಲಿ ಶ್ರೇಯಸ್ ಪಟೇಲ್ ಅವರು, ಇಲಾಖಾವಾರು ಕಾರ್ಯ ಪ್ರಗತಿಯ ಮಾಹಿತಿ ಪಡೆದು, ಸಾರ್ವಜನಿಕರಿಗೆ ಸ್ನೇಹಪರ ಸೇವೆ ಒದಗಿಸಬೇಕು. ಸರ್ಕಾರದ ಯೋಜನೆ ಗಳನ್ನು ಪ್ರಾಮಾಣಿಕವಾಗಿ ಮತ್ತು ಪರಿಣಾಮಕಾರಿ ಯಾಗಿ ಅನುಷ್ಠಾನಗೊಳಿಸು ವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ 5 ಇಲಾಖೆ ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಲಾಯಿತು. ಜಿಲ್ಲೆಯ ಪ್ರತಿಯೊಬ್ಬರು ಗ್ಯಾರಂಟಿ ಯೋಜನೆಯ ಫಲಾನುಭವಿಗಳಾಗಬೇಕು. ಆ ನಿಟ್ಟಿನಲ್ಲಿ ನಗರ ಹಾಗು ಗ್ರಾಮೀಣ ಭಾಗದಲ್ಲಿ ಅರಿವು ಮೂಡಿಸಬೇಕೆಂದು ಹೇಳಿದರು.

## ರಾಜ್ಯ ಸರ್ಕಾರ ಇದ್ದೂ ಇಲ್ಲದಂತಿದೆ: ಶಾಸಕ ಸ್ವರೂಪ್

• ಪ್ರಜೋದಯ ವರದಿ

**ಹಾಸನ:** ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೆಚ್ಚುವರಿ ಪೊಲೀಸ್ ಠಾಣೆ ಹಾಗು ಸಬ್‌ಇನ್ಸ್‌ಪೆಕ್ಟರ್‌ಗಳಿಗೆ ಸರ್ಕಾರಿ ವಾಹನ ಮಂಜೂರು ಮಾಡುವಂತೆ ಹಲವು ಬಾರಿ ಮನವಿ ಮಾಡಿದರೂ ಸ್ಪಂದಿಸದ ರಾಜ್ಯ ಸರ್ಕಾರ ಇದ್ದೂ ಇಲ್ಲದಂತಿದೆ ಎಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ಆಕ್ರೋಶ ವ್ಯಕ್ತಪಡಿಸಿದರು.

ಖಾಸಗಿ ಆಸ್ಪತ್ರೆಗಳ ಮಾಲೀಕರ ಸಂಘ ಹಾಗು ಜಿಲ್ಲಾ ಸರ್ಕಾರಿ ನೌಕರರ ಸಂಘದಿಂದ ಪೊಲೀಸ್ ಇಲಾಖೆಗೆ ಶನಿವಾರ ಬೊಲೇರೋ ವಾಹನ ಹಸ್ತಾಂತರಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಪೊಲೀಸ್ ಇಲಾಖೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಸಿಬ್ಬಂದಿ ಹಾಗು ಮೂಲಸೌಕರ್ಯಗಳ ಕೊರತೆಯಿಂದ ಅನಾನುಕೂಲವಾಗುತ್ತಿದೆ. ಈ ಬಗ್ಗೆ ಸರ್ಕಾರದ ಗಮನ ಸೆಳೆದರೂ ಪ್ರಯೋಜನವಾಗಿಲ್ಲವೆಂದರು.

ಪೊಲೀಸ್ ಇಲಾಖೆಗೆ ವಾಹನಗಳ ಕೊರತೆ ಇರುವುದು ಗಮನಕ್ಕೆ ಬಂದ ನಂತರ ಖಾಸಗಿ ಆಸ್ಪತ್ರೆ ಮಾಲೀಕರ ಸಂಘದ ಸಹಯೋಗದಲ್ಲಿ ಒಂದು ವಾಹನ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಶಾಸಕರ ನಿಧಿನಿಯಿಂದ 2 ಹಾಗು ಹುಡಾದಿಂದ 1 ಸೇರಿ ಮೂರು ವಾಹನ ನೀಡ ಲಾಗುವುದೆಂದರು. ವಿಧಾನ ಸಭಾ ಕ್ಷೇತ್ರಕ್ಕೆ ಒಂದು ಹೆಚ್ಚುವರಿ ಪೊಲೀಸ್ ಠಾಣೆ ಹಾಗು ಸಿಬ್ಬಂದಿ ನೇಮಕಕ್ಕೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಆದರೆ ಆಗುವುದಿಲ್ಲ ಎಂಬ ಉತ್ತರ ನೀಡುವ ಮೂಲಕ ಸರ್ಕಾರ ಹಾಸನವನ್ನು ಕಡೆಗಣಿಸಿದೆ. ಶಾಸಕರಿಗೆ ಬರುವ ಅನುದಾನ ವನ್ನು ಕಡಿತಗೊಳಿಸಿ ಅಭಿವೃದ್ಧಿಗೆ ಮಾರಕವಾಗಿದೆ. ಮುಂದಿನ ದಿನಗಳಲ್ಲಾದರೂ ಹೆಚ್ಚಿನ ಅನುದಾನ ಹಾಗು ಸಿಬ್ಬಂದಿ ನೇಮಕ ಮಾಡಿ ಇಲಾಖೆಗೆ ಶಕ್ತಿ ತುಂಬುವ ಕೆಲಸ ಮಾಡಬೇಕೆಂದರು.



ನಗರ ಭಾಗದಲ್ಲಿ ಪ್ರತಿದಿನ 12 ಲಕ್ಷಕ್ಕೂ ಹೆಚ್ಚು ವಾಹನಗಳು ಸಂಚರಿಸುತ್ತವೆ. ಅದಕ್ಕನು ಗುಣವಾಗಿ ಪೊಲೀಸ್ ಇಲಾಖೆಗೆ ಸಿಬ್ಬಂದಿ ನೇಮಕವಾಗಬೇಕು. ನಗರಸಭೆ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ್ದು ಅದಕ್ಕೂ ಮುಂದಿನ 3 ವರ್ಷಗಳ ಕಾಲ ಅನುದಾನ ನೀಡಲು ಆಗುವುದಿಲ್ಲ ಎಂಬ ಲಿಖಿತ ಉತ್ತರವನ್ನು ಸರ್ಕಾರ ನೀಡಿದೆ. ಗ್ಯಾರಂಟಿ ಯೋಜನೆಗಳಿಂದಾಗಿ ಅನುದಾನವಿಲ್ಲದೆ ಶಾಸಕರು ಕಂಗಾಲಾಗಿದ್ದಾರೆ. ಆಡಳಿತರೂಢ ಕಾಂಗ್ರೆಸ್ ಸರ್ಕಾರ ಕೇವಲ ಗ್ಯಾರಂಟಿ ಯೋಜನೆಗಳನ್ನು ಗುರಿಯಾಗಿಟ್ಟುಕೊಂಡು ಬೇರೆ ಅಭಿವೃದ್ಧಿ ಮಾಡದೆ ನಿರ್ಲಕ್ಷ್ಯ ತೋರಿದೆ. ಮುಂದಿನ ಬಜೆಟ್ ಅಧಿವೇ ಶನದಲ್ಲಾದರೂ ಹಾಸನಕ್ಕೆ ಹೆಚ್ಚಿನ ಅನುದಾನ ನೀಡಿ ಅಭಿವೃದ್ಧಿಗೆ ಸಹಕಾರ ನೀಡಲಿ ಎಂದು ಆಗ್ರಹಿಸಿದರು.

ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಾಗೂರು ಕೃಷ್ಣೇಗೌಡ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿಧಿ, ಡಾ|| ಅಬ್ದುಲ್ ಬಷೀರ್, ಡಾ|| ಮನುಪ್ರಕಾಶ್, ಡಾ|| ಭಾರತೀ ರಾಜಶೇಖರ್ ಮತ್ತಿತರರಿದ್ದರು.

### ತಾಲ್ಲೂಕು ಮಟ್ಟದ ಜನಸ್ಪಂದನಾ ಸಭೆಯಲ್ಲಿ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೂಚನೆ

# ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿರುವ ಸಮಸ್ಯೆ ತಕ್ಷಣ ಪರಿಹರಿಸಿ

• ಪ್ರಜೋದಯ ವರದಿ

**ಬೇಲೂರು:** ತಾಲ್ಲೂಕು ಕಚೇರಿಯಲ್ಲಿ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರ ಅಧ್ಯಕ್ಷತೆಯಲ್ಲಿ ನಡೆದ ತಾಲ್ಲೂಕು ಮಟ್ಟದ ಜನಸ್ಪಂದನಾ ಸಭೆಯಲ್ಲಿ ಸಾರ್ವಜನಿಕರಿಂದ 185ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಿ ಸಮಸ್ಯೆಗಳ ಪರಿಹರಿಸಲು ಕ್ರಮ ಕೈಗೊಳ್ಳಲಾಯಿತು. ಹೆಚ್ಚಿನ ಅರ್ಜಿಗಳು ಭೂ ದಾಖಲೆ, ಕಂದಾಯ, ಸರ್ವೆ ಹಾಗು ಭೂ ಪರಿವರ್ತನೆಗೆ ಸಂಬಂಧ ಪಟ್ಟವಾಗಿದ್ದವು.

ಅರ್ಜಿಗಳ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ, ಕೆಲವೊಂದು ಸಮಸ್ಯೆಗಳು ಅಧಿಕಾರಿಗಳ ನಿರ್ಲಕ್ಷ್ಯದಿಂದ ಉದ್ಭವಿಸಿರುವುದು ಗಮನಕ್ಕೆ ಬಂದಿದ್ದು, ಅವುಗಳನ್ನು ತಕ್ಷಣವೇ ಪರಿಹರಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಕಚೇರಿಯಿಂದ ಕಚೇರಿಗೆ, ಅಧಿಕಾರಿಯಿಂದ ಅಧಿಕಾರಿಗೆ ಅಲೆದಾಡುವ ಪರಿಸ್ಥಿತಿ ಉಂಟಾಗುತ್ತಿರುವುದನ್ನು ಮನಗಂಡು, ಪ್ರತಿ ತಿಂಗಳ ಮೂರನೇ ಶನಿವಾರ ಜನಸ್ಪಂದನ ಸಭೆ ನಡೆಸಲಾಗುತ್ತಿದೆ. ಈ ವೇದಿಕೆಯನ್ನು ಸಾರ್ವಜನಿಕರು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಯಾವುದೇ ಸಂದರ್ಭದಲ್ಲೂ ಅಧಿಕಾರಿಗಳಿಗೆ ಲಂಚ ನೀಡುವುದು ಅಥವಾ ಅವರ ಮೇಲೆ ಒತ್ತಡ ಹೇರುವಂತಹ ಕ್ರಮಗಳನ್ನು ಕೈಗೊಳ್ಳಬಾರದೆಂದು ತಿಳಿಸಿದರು.

ಜನಸ್ಪಂದನಾ ಸಭೆಯಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಒಂದೇ ಸ್ಥಳದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಾಜರಿರುತ್ತಾರೆ. ಅದರಿಂದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಮುಂದೆ ಇಟ್ಟು ತ್ವರಿತ ಹಾಗು ತಾತ್ಕಾಲಿಕ ಪರಿಹಾರವನ್ನು ಪಡೆಯಲು ಸಾಧ್ಯವಾಗುತ್ತದೆ. ಸಮಸ್ಯೆಯ ಮೂಲ ಕಾರಣ, ಅದರ ಹಿನ್ನಲೆ ಹಾಗು ಮುಂದಿನ ಮಾರ್ಗ ದರ್ಶನವನ್ನು ಅಲ್ಲಿಯೇ ಸ್ಪಷ್ಟವಾಗಿ ತಿಳಿಸಬಹುದು.

ಅಧಿಕಾರಿಗಳು ಲಭ್ಯವಿಲ್ಲ ಎಂಬ ಕಾರಣ ಹೇಳಲು ಯಾವುದೇ ಅವಕಾಶ ಇರುವುದಿಲ್ಲ. ಬೇರೆ ಬೇರೆ ಕಚೇರಿಗಳಿಗೆ ಅಲೆದಾಡುವ ಅವಶ್ಯಕತೆಯೂ ತಪ್ಪುತ್ತದೆ. ಹಿಂದೆ ಅರ್ಜಿಗಳ ಸಂಖ್ಯೆ ಹೆಚ್ಚಾಗುತ್ತಲೇ ಇತ್ತು. ಆದರೆ ಈಗ ಸ್ಥಳದಲ್ಲೇ ಸಮಸ್ಯೆ ಪರಿಹಾರಕ್ಕೆ ಪ್ರಯತ್ನಿಸಲಾಗುತ್ತಿರುವುದರಿಂದ ಅರ್ಜಿಗಳ ಸಂಖ್ಯೆಯೂ ಕಡಿಮೆಯಾಗುತ್ತಿದೆ. ತಾಲ್ಲೂಕು ಮಟ್ಟದಲ್ಲೇ ಹೆಚ್ಚಿನ ಸಮಸ್ಯೆಗಳನ್ನು ಪರಿಹರಿಸುವುದರಿಂದ ಅವು ಜಿಲ್ಲಾ ಮಟ್ಟದ ತನಕ ಹೋಗುವುದು ಕಡಿಮೆಯಾಗುತ್ತದೆ. ಜಿಲ್ಲಾ ಉಸ್ತುವಾರಿ ಸಚಿವರು ಸಹ ಜನಸ್ಪಂದನ ಕಾರ್ಯಕ್ರಮ ನಡೆಸುತ್ತಿದ್ದಾರೆ. ಆ ನಿಟ್ಟಿನಲ್ಲಿ ಜನಸ್ಪಂದನ ಕಾರ್ಯಕ್ರಮ ಆಯೋಜಿಸಲಾಗಿದೆಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಭೂಮಿಗೆ ಸಂಬಂಧಿಸಿದ ಸಮಸ್ಯೆಗಳು » ನಾಲ್ಕನೇ ಪುಟದಲ್ಲಿ



**ಅಧಿಕಾರಿಗಳ ವಿಳಂಬ ಮತ್ತು ನಿರ್ಲಕ್ಷ್ಯದಿಂದ ಸಾರ್ವಜನಿಕರು ಅಲೆಯುವಂತೆ ಮಾಡಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ. ಉದ್ದೇಶಪೂರ್ವಕವಾಗಿ ಅರ್ಜಿ ವಿಲೇವಾರಿಗೆ ತಡ ಮಾಡಿದರೆ ಕ್ರಮ ಖಚಿತ. ಸಾರ್ವಜನಿಕರೂ ಅಧಿಕಾರಿಗಳಿಗೆ ಒತ್ತಡ ಹಾಗು ಲಂಚ ನೀಡಬಾರದು.**
**-ಕೆ.ಎಸ್.ಲತಾಕುಮಮಾರಿ, ಜಿಲ್ಲಾಧಿಕಾರಿ**

